ದಿನಾಂಕಃ 09.04.2025 ರಂದು ಸಾಕ್ಷಿಯನ್ನು ಕರೆಸಲಾಯಿತು ಮತ್ತು ಪ್ರಮಾಣ ವಚನ ಬೋಧಿಸಲಾಯಿತು.

**ಪಾಟೀ ಸವಾಲು ಆರೋಪಿ ಪರ ಶ್ರೀ ಆರ್ ಟಿ ಎಸ್ ವಕೀಲರಿಂದಃ**

ಅಪಘಾತವಾದ ಸಮಯದಲ್ಲಿ ನಾನು ಮನೆಯಲ್ಲಿ ಇದ್ದೆ ನನಗೆ ಬೇರೆಯವರಿಂದ ಅಪಘಾತವಾದ ವಿಚಾರ ಗೊತ್ತಿರುತ್ತದೆ. ಅಪಘಾತವನ್ನು ನಾನು ಕಣ್ಣಾರೆನೋಡಿಲ್ಲ. ಅಪಘಾತ ಯಾರ ತಪ್ಪಿನಿಂದ ಆಗಿದೆ ಎಂದು ನನಗೆ ಗೊತ್ತಿಲ್ಲ ಎಂದರೆ ನಿಜ. ಆರೋಪಿಯನ್ನು ನಾನು ಈ ಹಿಂದೆ ಯಾವತ್ತೂ ನೋಡಿಲ್ಲ. ಆರೋಪಿ ಯಾವುದೇ ತಪ್ಪು ಮಾಡದಿದ್ದರೂ ಸಹ ಪರಿಹಾರ ಪಡೆಯುವ ಸಲುವಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಮಹಜರ್ ನಲ್ಲಿ ಏನು ಬರೆಯಲಾಗಿದೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ಸಹಿ ಮಾಡಲು ಹೇಳಿದ್ದರಿಂದ ನಾನು ಸಹಿ ಮಾಡಿದ್ದೇನೆ ಎಂದರೆ ನಿಜ. ಅಪಘಾತದ ಸ್ಥಳದಲ್ಲಿ ನಾನು ಯಾವುದೇ ವಾಹನವನ್ನು ಪೊಲೀಸರು ವಶಪಡಿಸಿಕೊಂಡಿರುವುದನ್ನು ನೋಡಿಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ಕೊಟ್ಟಿಲ್ಲ ಎಂದರೆ ನಿಜ .

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯು ಹೇಳಿದ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು )

ಓ ಹೇ ಕೇ ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ ಎಂ ಎಫ್ ಸಿ , ಹಿರಿಯೂರು